ಅಧ್ಯಕ್ಷರು : ಆಯಿತು. ತಾವು ಬೇಗ ಮುಕ್ತಾಯ ಮಾಡಿ.

ಶ್ರೀ ಹೆಚ್.ಡಿ. ರೇವಣ್ಣ : ಮಾನ್ಯ ಅಧ್ಯಕ್ಷರೆ, ಸಹಕಾರ ಇಲಾಖೆ ಬಗ್ಗೆ ಮಾನ್ಯ ಸಚಿವರು ಇವತ್ತು ಬಹಳ interest ಆಗಿದ್ದಾರೆ. ಆದ್ದರಿಂದ, ಮಾಡುವುದಕ್ಕೆ ಹೇಳಿ. ಏಕೆಂದರೆ, ಹಿಂದೆ ಇದ್ದಂಥ ಮಂತ್ರಿಗಳು ಯಾರೂ ಮಾಡಿಲ್ಲ. ಒಂದು ಕೆ.ಜಿ. ಹಾಲಿನ ಪೌಡರಿಗೆ ಸುಮಾರು 40 ರೂಪಾಯಿ ನಷ್ಟವಾಗಿದೆ. ಈ entire ನಷ್ಟವನ್ನು ಯಾರು ಭರಿಸಿಕೊಡುತ್ತಾರೆಂಬ ಬಗ್ಗೆ ದಯಮಾಡಿ ಉತ್ತರ ಹೇಳಬೇಕಾಗುತ್ತದೆ.

ಅಧ್ಯಕ್ಷರು : ಆಯಿತು xxx xxx xxx ಎಂಬ ಪದವನ್ನು ಕಡತದಿಂದ ತೆಗೆದು ಹಾಕಿದ್ದೇನೆ.

ಶ್ರೀ ಬಂಡೆಪ್ಪ ಕಾಶೆಂಪೂರ್ : xxx xxx xxx ಅದನ್ನು ಕಡತದಿಂದ ತೆಗೆಸಬೇಕು.

ಅಧ್ಯಕ್ಷರು : ಆಯಿತು. ಅದನ್ನು ತೆಗೆಸುತ್ತೇನೆ. ಈಗ ಒಂದು ಪ್ರಕಟಣೆ ಇದೆ, ನಂತರ ನೀವು ಮಾತನಾಡಿ.

8. ಪ್ರಕಟಣೆ :

ಅಧ್ಯಕ್ಷರು : ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಬಂದಿರುವ ಸಂದೇಶದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯ ವಿಧಾನ ಹಾಗೂ ನಡವಳಿಕೆ ನಿಯಮ 118ರ ಮೇರೆಗೆ ವಿಧಾನ ಪರಿಷತ್ತು 2012ನೇ ಸಾಲಿನ ಕರ್ನಾಟಕ ನಾಗರಿಕರಿಗೆ ಸೇವೆಗಳ ಖಾತರಿ (ತಿದ್ದುಪಡಿ) ವಿಧೇಯಕವನ್ನು ದಿನಾಂಕ: 2.08.2012 ರಂದು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಲಾಗಿದೆ ಎಂದು ತಿಳಿಸಿರುತ್ತಾರೆ.

---

xxxxx (ಮಾನ್ಯ ಅಧ್ಯಕ್ಷರ ಆದೇಶದ ಮೇರೆಗೆ ಮೇಲಿನ ಪದಗಳನ್ನು ಕಡತದಿಂದ ತೆಗೆದು ಹಾಕಲಾಗಿದೆ)

ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಬಂದಿರುವ ಸಂದೇಶದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯ ವಿಧಾನ ಹಾಗೂ ನಡವಳಿಕೆ ನಿಯಮ 118ರ ಮೇರೆಗೆ ವಿಧಾನ ಪರಿಷತ್ತು 2012ನೇ ಸಾಲಿನ ಕರ್ನಾಟಕ ಹೋಮಿಯೋಪತಿ ವೃತ್ತಿಗಾರರ (ತಿದ್ದುಪಡಿ) ವಿಧೇಯಕವನ್ನು ದಿನಾಂಕ: 2.08.2012 ರಂದು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸ ಲಾಗಿದೆ ಎಂದು ತಿಳಿಸಿರುತ್ತಾರೆ.

9. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಮುಂದುವರೆದ ಚರ್ಚೆ :

ವಿಷಯ : ರಾಜ್ಯದಲ್ಲಿರುವ ಸಹಕಾರ ಸಂಘಗಳಲ್ಲಿ ಹಣ ದುರುಪಯೋಗ ಹಾಗೂ ಫಲಾನುಭವಿಗಳಿಗೆ ಸಿಗಬೇಕಾದ ಸೌಲಭ್ಯಗಳನ್ನು ಒಬ್ಬನೇ ಉಪಯೋ ಗಿಸುತ್ತಿದ್ದಾರೆಂದು ಪತ್ರಿಕಾ ಹೇಳಿಕೆ ಕುರಿತು ಮುಂದುವರೆದ ಚರ್ಚೆ :

ಅಧ್ಯಕ್ಷರು : ಮಾನ್ಯ ಸಚಿವರೆ, ಬಹಳ ಸಂಕ್ಷಿಪ್ತವಾಗಿ ಉತ್ತರ ಹೇಳಿ. ಸುಮ್ಮನೆ ಡೀಟೆಲ್ ಆಗಿ ಹೋಗಬೇಡಿ.

ಶ್ರೀ ಹೆಚ್.ಡಿ. ರೇವಣ್ಣ : ಈ ಮಾಹಿತಿ ಕಳುಹಿಸಿ ಕೊಡುತ್ತೇನೆ. ತನಿಖೆ ಮಾಡುವುದಕ್ಕೆ ಅವರಿಗೆ ಹೇಳಿ.

ಅಧ್ಯಕ್ಷರು : ಆಯಿತು.

ಶ್ರೀ ಬಿ.ಜೆ. ಪುಟ್ಟಸ್ವಾಮಿ : ಸನ್ಮಾನ್ಯ ಅಧ್ಯಕ್ಷರೆ, ನಾನು ಉತ್ತರವನ್ನು ಮುಂದುವರೆಸುತ್ತಿದ್ದೆನೆ, ಮತ್ತೆ ಹಿಂದಕ್ಕೆ ಹೋಗುವುದಿಲ್ಲ. ವಸೂಲಿ ಬಾಕಿ ಇರುವ ಹಣದ ಪ್ರಕರಣಗಳ ಸಂಖ್ಯೆ 4834 ಮತ್ತು ವಸೂಲಿ ಮಾಡಬೇಕಾ ಗಿರುವ ಮೊತ್ತ 107.32 ಕೋಟಿ ರೂಪಾಯಿ co-operative societyಯಿಂದ ವಸೂಲ್ಮಾಡಬೇಕಾಗಿದೆ. ಹಣ ದುರುಪಯೋಗ ಮಾಡಿದ್ದ ಕಾರಣಕ್ಕಾಗಿ ತೆಗೆದುಕೊಂಡು ಕ್ರಮಗಳು: ಅಮಾನತ್ತಿನಲ್ಲಿರಿಸಿರುವ ಸಿಬ್ಬಂದಿಗಳ ಸಂಖ್ಯೆ 860, ವಜಾ ಮಾಡಿರುವ ಸಿಬ್ಬಂದಿಗಳ ಸಂಖ್ಯೆ 2069, ಕಲಂ 29C ಪ್ರಕಾರ ಅನರ್ಹಗೊಳಿಸಿರುವ ವ್ಯಕ್ತಿಗಳ ಸಂಖ್ಯೆ 182, ಶಿಸ್ತಿನ ಕ್ರಮಕ್ಕೆ ಒಳಪಡಿಸಿ ರತಕ್ಕಂಥದ್ದು 543, ಕ್ರಿಮಿನಲ್ ಕ್ರಮ ಕೈಗೊಳ್ಳುವುದಕ್ಕೆ ಬಾಕಿ ಇರತಕ್ಕಂತದ್ದು